**ಕರ್ನಾಟಕ ಸರ್ಕಾರ**

ಸಂ:ಎ.ಎಲ್.ಎನ್:(ಎಸ್)ಎಸ್.ಆರ್(ಕೆಂ)16/12-13

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 21-5-2012

## ಅಧಿಕೃತ ಜ್ಞಾಪನ

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕೆಂಚನಪುರ ಗ್ರಾಮದ ಸರ್ವೆ ನಂಬರ್ 61 ರಲ್ಲಿ 1-35 ಎಕರೆ:ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ಕೈಗಾರಿಕಾ (ಹೈಟೆಕ್) ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀಮತಿ ಮುದ್ದಹನುಮಕ್ಕ ಕೋಂ ಗೋವಿಂದಪ್ಪ ರವರು ದಿನಾಂಕ: 16-3-2012 ರಂದು ಸಲ್ಲಿಸಿರುವ ಮನವಿಯ ಬಗ್ಗೆ.

ಉಲ್ಲೇಖ:- 1) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ 7 ಎಲ್‌ಜಿಪಿ 95, ದಿನಾಂಕ: 07-06-1999.

2) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ 56 ಎಲ್‌ಜಿಪಿ 2008, ದಿನಾಂಕ:10-9-2008 ಮತ್ತು 24-09-2008.

3) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರ ವರದಿ ಸಂಖ್ಯೆ: ಎ.ಎಲ್.ಎನ್/ಎಸ್.ಆರ್/1105/11-12, ದಿನಾಂಕ: 26-04-2012 .

4) ಭೂ ಪರಿವರ್ತನಾ ಶುಲ್ಕ ರೂ. 3,26,700-00 ಹಾಗೂ ಪೋಡಿ ಶುಲ್ಕ ರೂ.55-00 ಒಟ್ಟು ರೂ. 3,26,755-00 ಗಳನ್ನು ಡಿ.ಡಿ./ಚಲನ್ ನಂ.87-167, 87-168, 91, ದಿನಾಂಕ: 18-5-2012 ಮತ್ತು 19-5-2012 ರಂದು ಎಸ್.ಬಿ.ಎಂ.ಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.

5)ಸಹಾಯಕ ನಿರ್ದೇಶಕರು (ಯೋಜನೆ), ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಖ್ಯೆ:ಬೆಂಅಪ್ರಾ/ನಯೋಸ/ಸಿಒಎನ್-214/726/2012-13, ದಿನಾಂಕ: 5-5-2012 ಮತ್ತು ಅಪರ ಭೂ ಸ್ವಾಧೀನಾಧಿಕಾರಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರ ಪತ್ರ ಸಂಖ್ಯೆ: ಬೆಂಅಪ್ರಾ/ಅಭೂಸ್ವಾಅ/02/2012-13, ದಿನಾಂಕ: 04-05-2012

* * * * *

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95(2), 95(4) ಮತ್ತು 95(7)ರ ಷರತ್ತುಗಳು ಹಾಗೂ ಷರತ್ತುಗೊಳಪಡಿಸಿ, ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994 ರ ನಿಯಮ 107(1) ರಂತೆ ಎಕರೆ ಒಂದಕ್ಕೆ ರೂ. 1,74,240-00 (ಒಂದು ಲಕ್ಷದ ಎಪ್ಪತ್ತನಾಲ್ಕು ಸಾವಿರದ ಇನ್ನೂರ ನಲವತ್ತು ರೂಪಾಯಿಗಳು ಮಾತ್ರ)ಅರ್ಜಿದಾರರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ, ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ ಶ್ರೀಮತಿ ಮುದ್ದಹನುಮಕ್ಕ ಕೋಂ ಗೋವಿಂದಪ್ಪ , ಕೆಂಚನಪುರ, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು ರವರ ಅರ್ಜಿಯನ್ನು ಪರಿಗಣಿಸಿ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕೆಂಚನಪುರ ಗ್ರಾಮದ, ಸ.ನಂ.61 ರಲ್ಲಿ 1-35 ಎಕರೆ:ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ಕೈಗಾರಿಕಾ (ಹೈಟೆಕ್) ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

## :: ಷೆಡ್ಯೂಲ್ ವಿವರ ::

ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, **ಕೆಂಗೇರಿ ಹೋಬಳಿ, ಕೆಂಚನಪುರ** ಗ್ರಾಮದ ಸ.ನಂ. 84/1 ರಲ್ಲಿ ಒಟ್ಟು 2–22 ಎಕರೆ/ಗುಂಟೆ ಮತ್ತು ಸ.ನಂ. 84/2 ರಲ್ಲಿ 0–20 ಗುಂಟೆ ಒಟ್ಟು 3–02 ಎಕರೆ/ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿಗೆ ಚಕ್ಕುಬಂಧಿ

## :: ಚಕ್ಕುಬಂಧಿ ::

| ಸರ್ವೆ ನಂ | ಪೂರ್ವಕ್ಕೆ | ಪಶ್ಚಿಮಕ್ಕೆ | ಉತ್ತರಕ್ಕೆ | ದಕ್ಷಿಣಕ್ಕೆ |
|---|---|---|---|---|
| 84/1 & 84/2 ಒಟ್ಟಾರೆ | ಸ.ನಂ. 84/1ರ ಉಳಿಕೆ ಜಮೀನು | ಸ.ನಂ. 83 ಮತ್ತು 85 ರ ಜಮೀನು | ಸ.ನಂ. 80 ಮತ್ತು 83 ರ ಜಮೀನು | ಸೂಲಿಕೆರೆ ಗ್ರಾಮದ ಗಡಿ ಮತ್ತು ರಸ್ತೆ |

ಸಹಿ/–
(ವಿ.ಶಂಕರ್)
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

**ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ:–**

1) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ಮೇಲ್ಕಂಡ ಅಧಿಕೃತ ಜ್ಞಾಪನ ಮತ್ತು ಚಲನ್ ಹಾಗೂ ಕರಾರು ಪತ್ರದೊಂದಿಗೆ ಕಳುಹಿಸುತ್ತಾ, ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.
2) ನಗರ ಯೋಜನಾ ಸದಸ್ಯರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪ ವಿಭಾಗ, ಕೆ.ಜಿ.ರಸ್ತೆ, ಬೆಂಗಳೂರು.
4) ಉಪ ನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪ ವಿಭಾಗ, ಬೆಂಗಳೂರು ಇವರಿಗೆ ಆರ್.ಟಿ.ಸಿ. ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ, ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪ ನೊಂದಣಾಧಿಕಾರಿಗಳು, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6) **ಶ್ರೀಮತಿ ಲಕ್ಷ್ಮೀಬಾಯಿ, ಶ್ರೀಮತಿ ವೆಂಕೂಬಾಯಿ, ಶ್ರೀಮತಿ ಸಾವಿತ್ರಿಬಾಯಿ, ಶ್ರೀಮತಿ ಶಾಂತಾಬಾಯಿ, ಶ್ರೀಮತಿ ಶಾರದಾಬಾಯಿ ಶ್ರೀಮತಿ ನಾಗುಬಾಯಿ, ಕೆಂಚನಪುರ ಗ್ರಾಮ, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ಜಿಲ್ಲೆ** ರವರಿಗೆ ಮಾಹಿತಿಗಾಗಿ.
7) ಹೆಚ್ಚಿನ ಪ್ರತಿ.

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

1) ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರದಿಂದ ಅಂದರೆ, **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ. (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ/ ಮಾಲಿನ್ಯ ನಿಯಂತ್ರಣಾ ಮಂಡಳಿ** ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2) ಈ ಪರಿವರ್ತಿತ ಜಮೀನನ್ನು ಕೈಗಾರಿಕಾ (ಹೈಟೆಕ್) ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು

3) ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ. (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ/ಪ್ರಾಧಿಕಾರದಿಂದ** ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್/ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು

4) ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ.ನಿವೇಶನ, ಖಾಲಿ ಜಾಗ, ಇತ್ಯಾದಿಗಳನ್ನು **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಎಂ.ಆರ್.ಡಿ.ಎ.(ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ** ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5) **ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ಕಟ್ಟಡಗಳನ್ನು ಸಂಬಂಧಪಟ್ಟ ನೋಂದಣಾಧಿಕಾರಿಗಳಿಂದ/ಉಪನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.**

6) ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ಕುಡಿಯುವ ನೀರು, ರಸ್ತೆ, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7) **ಈ ಜಮೀನಿಗೆ ತಾಕು ಪೂಟ್ ಖರಾಬ್ ಜಮೀನು ಇದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ತಹಶೀಲ್ದಾರರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.**

8) ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯೂಡಿ 7556–665 ಆರ್ ಮತ್ತು ಬಿ–6–54–5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ.1/7(11)67, ದಿನಾಂಕ: 01–01–1966 ರಂತೆ ಸರ್ಕಾರವು ಕಾಲ ಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾಯ್ದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9) **ಭೂ ಪರಿವರ್ತನೆ ಮಂಜೂರಿ ಯಾವ ಉದ್ದೇಶಕ್ಕೆ ಆಗಿರುತ್ತದೆಯೋ ಅದೇ ಉದ್ದೇಶಕ್ಕೆ ಈ ದಿನದಿಂದ ಎರಡು ವರ್ಷಗಳ ಒಳಗಾಗಿ ಉಪಯೋಗಿಸತಕ್ಕದ್ದು.**

10) ಈ ಭೂ ಪರಿವರ್ತನಾ ಜಮೀನಿನಲ್ಲಿ **ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು.** ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

11) ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ/ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

12) ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

13) ಪರಿಷ್ಕೃತ ಮಾಸ್ಟರ್ ಪ್ಲಾನ್ 2015 ರಲ್ಲಿ ಸೂಕ್ಷ್ಮ ವಲಯ ನಲ್ಲಿ ಬರುವ ಪ್ರದೇಶಗಳಿಗೆ ಸಂಬಂಧಪಟ್ಟ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಭಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.

14) ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

15) ಪ್ರಶ್ನಿತ ಜಮೀನು ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 136(3) ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

16) ಪ್ರಶ್ನಿತ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ ತಕ್ಷಣವೇ ಪಕ್ಕ ಪೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

17) ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತಜ್ಞಾಪನ ಪಡೆದಿರುವುದು ಸ್ಪಷ್ಟಪಟ್ಟಲ್ಲಿ ತನ್‌ತಾನೇ ರದ್ದುಗೊಳ್ಳುತ್ತದೆ ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದ್ದೇ ಆಗಿರುತ್ತದೆ.

18) ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶವನ್ನು ಯಾವುದೇ ಸೂಚನೆ ನೀಡದೇ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ 'ಅನಧಿಕೃತವಾಗಿ

ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೇದಾರರಿಂದ ವಸೂಲಿ ಮಾಡಲಾಗುವುದು.

## ಷೆಡ್ಯೂಲ್ ವಿವರ

ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕೆಂಚನಪುರ ಗ್ರಾಮದ ಸ.ನಂ. 61 ರಲ್ಲಿ 1–35 ಎಕರೆ:ಗುಂಟೆ ವಿಸ್ತೀರ್ಣ ಕೈಗಾರಿಕಾ (ಹೈಟೆಕ್) ಉದ್ದೇಶಕ್ಕೆ ಭೂ ಪರಿವರ್ತಿಸಿರುವ ಜಮೀನಿನ ಚಕ್ಕುಬಂದಿ:

**ಪೂರ್ವಕ್ಕೆ** ಈ ನಂಬರಿನ ಉಳಿಕೆ ಜಮೀನು
**ಪಶ್ಚಿಮಕ್ಕೆ** ಈ ನಂಬರಿನ ಉಳಿಕೆ ಜಮೀನು
**ಉತ್ತರಕ್ಕೆ** ಸ.ನಂ.53, ಸ.ನಂ.54 ರ ಜಮೀನು
**ದಕ್ಷಿಣಕ್ಕೆ** ರಸ್ತೆ ಮತ್ತು ಸ.ನಂ.78 ರ ಜಮೀನು

**ಸಹಿ/–**
**(ಎಂ.ಕೆ.ಅಯ್ಯಪ್ಪ),**
**ಜಿಲ್ಲಾಧಿಕಾರಿಗಳು,**
**ಬೆಂಗಳೂರು ಜಿಲ್ಲೆ,ಬೆಂಗಳೂರು.**

<u>ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಲಾಗಿದೆ.</u>

1) ತಹಶೀಲ್ದಾರರು, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ.ಯಲ್ಲಿ ಕೂಡಲೆ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿತಗೊಳಿಸುವುದು.
2) **ನಗರ ಯೋಜನಾ ಸದಸ್ಯರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು** ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು.
4) ಉಪನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪವಿಭಾಗ, ಬೆಂಗಳೂರು ಇವರಿಗೆ ಆರ್.ಟಿ.ಸಿ. ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪ ನೋಂದಣಾಧಿಕಾರಿಗಳು, ಕೆಂಗೇರಿ, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
6) ಅರ್ಜಿದಾರರಾದ ಶ್ರೀಮತಿ ಮುದ್ದಹನುಮಕ್ಕ ಕೋಂ ಗೋವಿಂದಪ್ಪ , ಕೆಂಚನಪುರ, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ದೃಢೀಕೃತ ಅಂಚೆ ಮೂಲಕ ಕಳುಹಿಸಲಾಗಿದೆ.
7) ಹೆಚ್ಚಿನ ಪ್ರತಿ.

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ,ಬೆಂಗಳೂರು.

**ಕರ್ನಾಟಕ ಸರ್ಕಾರ**

ನಂ. ಎ.ಎಲ್.ಎನ್(ಎಸ್)ಎಸ್ಆರ್(ಕೆಂ)/15/12-13

ಜಿಲ್ಲಾಧಿಕಾರಿಗಳವರ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 8/10/2013

**-: ಅಧಿಕೃತ ಜ್ಞಾಪನ :-**

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕೆಂಚನಪುರ ಗ್ರಾಮದ ಸ.ನಂ. 62/2 ರಲ್ಲಿ 1-00 ಎಕರೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀ ರಾಜು ಬಿನ್ ರುದ್ರಯ್ಯ ರವರು ಸಲ್ಲಿಸಿರುವ ಅರ್ಜಿಯ ದಿನಾಂಕ: 16-03-2012

ಉಲ್ಲೇಖ:-
1) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 7 ಎಲ್‌ಜಿಪಿ 95 ದಿನಾಂಕ: 7-6-1999
2) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 56 ಎಲ್‌ಜಿಪಿ 20008 ದಿನಾಂಕ: 10-9-2008 ಮತ್ತು 24-9-2008
3) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರ ವರದಿ ಸಂ: ಎಎಲ್ಎನ್/ಎಸ್ಆರ್/1104/11-12 ದಿನಾಂಕ: 18/04/2012 ಮತ್ತು 29/08/2013
4) ಭೂ ಪರಿವರ್ತನಾ ಶುಲ್ಕ ರೂ. 1,74,240/- ಪೋಡಿ ಶುಲ್ಕ 55/- ಒಟ್ಟು ರೂ. 1,74,295/- ರೂ.ಗಳನ್ನು ಚಲನ್ ನಂ. 54/132 ಮತ್ತು 54/133 ರಂತೆ ದಿನಾಂಕ: 28-09-2013 ರಂದು ಎಸ್.ಬಿ.ಎಂ. ಬೆಂಗಳೂರು ಇಲ್ಲಿ ಅರ್ಜಿದಾರರು ಜಮಾ ಮಾಡಿರುತ್ತಾರೆ.
5) ಸಹಾಯಕ ನಿರ್ದೇಶಕರು (ಯೋಜನೆ) ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/ ಸಿಓಎಸ್-212/731/2012-13 ದಿನಾಂಕ: 5-05-2012 ಮತ್ತು ಅಪರ ಭೂಸ್ವಾಧೀನಾಧಿಕಾರಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಖ್ಯೆ: ಬೆಂಅಪ್ರಾ/ಅಭೂಸ್ವಾಅ/02/12-13 ದಿನಾಂಕ: 4-05-2012

****

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ಕಲಂ 95(2), 95(4) ಮತ್ತು 95(7)ರ ಷರತ್ತುಗಳು ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994ರ ನಿಯಮ 107(1)ರಂತೆ ಕೈಗಾರಿಕಾ ಉದ್ದೇಶಕ್ಕೆ ಎಕರೆ ಒಂದಕ್ಕೆ ರೂ 1,74,240/-(ಒಂದು ಲಕ್ಷದ ಎಪ್ಪತ್ನಾಲ್ಕು ಸಾವಿರದ ಎರಡು ನೂರ ನಲವತ್ತು ರೂಪಾಯಿಗಳು ಮಾತ್ರ) ಗಳಂತೆ, ಅರ್ಜಿದಾರರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ, ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ ಶ್ರೀ ರಾಜು ಬಿನ್ ರುದ್ರಯ್ಯ, ನಂ. 283, 4ನೇ ಅಡ್ಡರಸ್ತೆ, ಶ್ರೀಗಂಧನಗರ, ಹೆಗ್ಗನಹಳ್ಳಿ, ವಿಶ್ವನೀಡಂ ಅಂಚೆ, ಬೆಂಗಳೂರು-560091 ರವರು ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕೆಂಚನಪುರ ಗ್ರಾಮದ ಸ.ನಂ. 62/2 ರಲ್ಲಿ 1-00 ಎಕರೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ಕೈಗಾರಿಕಾ ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ / ಬಿಎಂಆರ್‌ಡಿಎ (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ / ಮಾಲಿನ್ಯ ನಿಯಂತ್ರಣ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2. ಈ ಪರಿವರ್ತಿತ ಜಮೀನನ್ನು ವ್ಯವಸಾಯೇತರ ಕೈಗಾರಿಕಾ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು, ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿಐಎಪಿಎ/ಬಿಬಿಎಂಆರ್‌ಡಿಎ (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ /ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಪ್ಲಾನಿಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

ಪ್ರಾಧಿಕಾರಿಗಳ ಕಛೇರಿ ಬೆಂಗಳೂರು

4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ ನಿವೇಶನ, ಖಾಲಿ ಜಾಗ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಐ.ಎಪಿಎ/ಬಿ.ಎಂ.ಆರ್.ಡಿ.ಎ (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ ಪ್ರಾಧಿಕಾರದಿಂದ ಅನುಮೋದಿಸಿ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟ ಪಡಿಸಿದ ನಿಯಮಗಳ ರೀತಿ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ ಕಟ್ಟಡಗಳನ್ನು ಸಂಬಂಧಪಟ್ಟ ನೊಂದಾವಣಾಧಿಕಾರಿಗಳಿಂದ/ಉಪನೋಂದಣಾಧಿಕಾರಿಗಳಿಂದ ನೊಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿಗೆ ಪೂರಾ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದ್ದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯಾ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. ಸದರಿ ಜಮೀನಿಗೆ ತಾಕು ಘೂಟ್ ಖರಾಬು ಇದ್ದಲ್ಲಿ, ಇದನ್ನು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರಕ್ಕೆ ಕಾಯ್ದಿರಿಸತಕ್ಕದ್ದು. ತಹಶೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ: ಪಿಡಬ್ಲ್ಯೂಡಿ:7556-665 ಆರ್ ಮತ್ತು ಬಿ-6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ 1/7(11) 67, ದಿನಾಂಕ: 1-1-1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ. ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಯ ಅನುಮತಿ ಹೊಂದಿರತಕ್ಕದ್ದು.

10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ/ ರಿಟ್ ಅರ್ಜಿ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂ ಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12. ಪರಿಷ್ಕೃತ ಮಾಸ್ಟರ್ ಪ್ಲಾನ್-2015 ರಲ್ಲಿ ಸೂಕ್ಷ್ಮ ವಲಯ (Sensitive Zone) ನಲ್ಲಿ ಬರುವ ಪ್ರದೇಶಗಳಿಗೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಇವರಿಗೆ ಭೂ ಪರಿವರ್ತನೆ ಬಗ್ಗೆ ಮಾಹಿತಿ ನೀಡುವಾಗ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.

13. ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

14. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

15. ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತ ಜ್ಞಾಪನ ಪಡೆದಿರುವುದು ಸ್ಪಷ್ಟಪಟ್ಟಲ್ಲಿ ತನ್‌ತಾನೆ ರದ್ದುಗೊಳ್ಳುತ್ತದೆ. ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದೇ ಆಗಿರುತ್ತದೆ.

16. ಪ್ರಶ್ನಿತ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ, ತಕ್ಷಣವೇ ಪಕ್ಕ ಪೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

17. ಪ್ರಶ್ನಿತ ಜಾಗದಲ್ಲಿ ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 136(3)ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

18. ಸಹಾಯಕ ನಿರ್ದೇಶಕರು (ಯೋಜನೆ) ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ದಿನಾಂಕ: 5-05-2012 ರ ಪತ್ರದಲ್ಲಿ ತಿಳಿಸಿರುವ ಷರತ್ತಿಗೆ ಒಳಪಟ್ಟಿರುತ್ತದೆ.

:: **<u>ಷೆಡ್ಯೂಲ್ ವಿವರ</u>** ::

ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕೆಂಚನಪುರ ಗ್ರಾಮದ ಸ.ನಂ. 62/2 ರಲ್ಲಿ 1-00 ಎಕರೆ ವಿಸ್ತೀರ್ಣದ ಭೂ ಪರಿವರ್ತಿತ ಜಮೀನಿಗೆ

**ಕರ್ನಾಟಕ ಸರ್ಕಾರ**

ಸಂ. ಎ.ಎಲ್.ಎನ್(ಎಸ್)ಎಸ್ಆರ್(ಕೆಂ)/77/14-15

ಜಿಲ್ಲಾಧಿಕಾರಿಗಳವರ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 29/09/2015

**-: ಅಧಿಕೃತ ಜ್ಞಾಪನ :-**

ವಿಷಯ:- ಬೆಂಗಳೂರು ಜಿಲ್ಲೆ, ಬೆಂಗಳೂರು ದಕ್ಷಿಣ ತಾಲ್ಲೂಕು, **ಕೆಂಗೇರಿ ಹೋಬಳಿ, ಕೆಂಚನಪುರ ಗ್ರಾಮದ ಸ.ನಂ. 84/1 ರಲ್ಲಿ ಒಟ್ಟು 2-22 ಎಕರೆ/ಗುಂಟೆ ಮತ್ತು ಸ.ನಂ. 84/2 ರಲ್ಲಿ 0-20 ಗುಂಟೆ ಒಟ್ಟು 3-02 ಎಕರೆ/ಗುಂಟೆ** ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ **ಶ್ರೀಮತಿ ಲಕ್ಷ್ಮೀಬಾಯಿ, ಶ್ರೀಮತಿ ವೆಂಕೂಬಾಯಿ, ಶ್ರೀಮತಿ ಸಾವಿತ್ರಿಬಾಯಿ, ಶ್ರೀಮತಿ ಶಾಂತಾಬಾಯಿ, ಶ್ರೀಮತಿ ಶಾರದಾಬಾಯಿ ಶ್ರೀಮತಿ ನಾಗುಬಾಯಿ** ರವರುಗಳು ಸಲ್ಲಿಸಿರುವ ಅರ್ಜಿಯ ದಿನಾಂಕ: 09-07-2014.

ಉಲ್ಲೇಖ:-
1) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 7 ಎಲ್‌ಜಿಪಿ 95 ದಿನಾಂಕ: 7-6-1999
2) ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಡಿ 56 ಎಲ್‌ಜಿಪಿ 20008 ದಿನಾಂಕ: 10-9-2008 ಮತ್ತು 24-9-2008
3) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರ ವರದಿ ಸಂ: ಎಎಲ್‌ಎನ್/ಎಸ್‌ಆರ್/632/14-15 ದಿನಾಂಕ: 20/05/2015
4) ಭೂ ಪರಿವರ್ತನಾ ಶುಲ್ಕ ರೂ. 1,66,073/- ಹಾಗೂ ಪೋಡಿ ಶುಲ್ಕ ರೂ. 110/- ಒಟ್ಟು ರೂ. 1,66,183/- ರೂ.ಗಳನ್ನು ಚಲನ್ ನಂ. 5/451 ಮತ್ತು 5/452 ರಂತೆ ದಿನಾಂಕ: 15-09-2015 ರಂದು ಎಸ್.ಬಿ.ಎಂ. ಬೆಂಗಳೂರು ಇಲ್ಲಿ ಅರ್ಜಿದಾರರು ಜಮಾ ಮಾಡಿರುತ್ತಾರೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು, ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಖ್ಯೆ: ಬೆಂಅಪ್ರಾ/ನಯೋಸ/ಸಿಓಎನ್-631/673/2015-16 ದಿನಾಂಕ: 13/08/2015 ಹಾಗೂ ಉಪ ಆಯುಕ್ತರು (ಭೂ.ಸ್ವಾ), ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಖ್ಯೆ: ಬೆಂಅಪ್ರಾ/ಉಪ(ಭೂಸ್ವಾ)/419/2015-16 ದಿನಾಂಕ: 11/08/2015.

****

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ಕಲಂ 95(2), 95(4) ಮತ್ತು 95(7)ರ ಷರತ್ತುಗಳು ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994ರ ನಿಯಮ 107(1)ರಂತೆ ವಾಸದ ಉದ್ದೇಶಕ್ಕೆ ಎಕರೆ ಒಂದಕ್ಕೆ ರೂ. 54,450/- (ಐವತ್ನಾಲ್ಕು ಸಾವಿರದ ನಾಲ್ಕುನೂರ ಐವತ್ತು ರೂಪಾಯಿಗಳು ಮಾತ್ರ) ಗಳಂತೆ, ಅರ್ಜಿದಾರರುಗಳು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ, ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರುಗಳಾದ **ಶ್ರೀಮತಿ ಲಕ್ಷ್ಮೀಬಾಯಿ, ಶ್ರೀಮತಿ ವೆಂಕೂಬಾಯಿ, ಶ್ರೀಮತಿ ಸಾವಿತ್ರಿಬಾಯಿ, ಶ್ರೀಮತಿ ಶಾಂತಾಬಾಯಿ, ಶ್ರೀಮತಿ ಶಾರದಾಬಾಯಿ ಶ್ರೀಮತಿ ನಾಗುಬಾಯಿ, ಕೆಂಚನಪುರ ಗ್ರಾಮ, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ಜಿಲ್ಲೆ** ರವರ ಅರ್ಜಿಯನ್ನು ಪರಿಗಣಿಸಿ, **ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕೆಂಚನಪುರ ಗ್ರಾಮದ** ಸ.ನಂ. 84/1 **ರಲ್ಲಿ ಒಟ್ಟು** 2-22 **ಎಕರೆ/ಗುಂಟೆ ಮತ್ತು** ಸ.ನಂ. 84/2 **ರಲ್ಲಿ** 0-20 **ಗುಂಟೆ ಒಟ್ಟು** 3-02 **ಎಕರೆ/ಗುಂಟೆ** ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

**:: ಚಕ್ಕುಬಂಧಿ ::**

| ಸರ್ವೆ ನಂ | ಪೂರ್ವಕ್ಕೆ | ಪಶ್ಚಿಮಕ್ಕೆ | ಉತ್ತರಕ್ಕೆ | ದಕ್ಷಿಣಕ್ಕೆ |
|---|---|---|---|---|
| 62/2 | ಸ.ನಂ. 61 ರ ಜಮೀನು | ಸ.ನಂ. 62/1 ರ ಜಮೀನು | ಸ.ನಂ. 61 ರ ಜಮೀನು | ರಸ್ತೆ ಮತ್ತು ಸ.ನಂ. 79 ರ ಜಮೀನು |

ಜಿಲ್ಲಾಧಿಕಾರಿಗಳ ಕಛೇರಿ ಬೆಂಗಳೂರು ಜಿಲ್ಲೆ

ಸಹಿ/-
(ಡಾ: ಜಿ.ಸಿ.ಪ್ರಕಾಶ್)
ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

**ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ:-**

1) ತಹಶೀಲ್ದಾರ್, ಬೆಂಗಳೂರು ದಕ್ಷಿಣ ತಾಲ್ಲೂಕು ರವರಿಗೆ ಮೇಲ್ಕಂಡ ಅಧಿಕೃತ ಜ್ಞಾಪನ ಮತ್ತು ಚಲನ್ ಹಾಗೂ ಕರಾರು ಪತ್ರದೊಂದಿಗೆ ಕಳುಹಿಸುತ್ತಾ, ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿ.ಯಲ್ಲಿ ಕೂಡಲೇ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸುವುದು.
2) ನಗರ ಯೋಜನಾ ಸದಸ್ಯರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪ ವಿಭಾಗ, ಕೆ.ಜಿ.ರಸ್ತೆ, ಬೆಂಗಳೂರು.
4) ಉಪ ನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪ ವಿಭಾಗ, ಬೆಂಗಳೂರು ಇವರಿಗೆ ಆರ್.ಟಿ.ಸಿ. ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ, ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ಉಪ ನೊಂದಣಾಧಿಕಾರಿಗಳು, ಕೆಂಗೇರಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6) ಶ್ರೀ ರಾಜು ಬಿನ್ ರುದ್ರಯ್ಯ, ನಂ. 283, 4ನೇ ಅಡ್ಡರಸ್ತೆ, ಶ್ರೀಗಂಧನಗರ, ಹೆಗ್ಗನಹಳ್ಳಿ, ವಿಶ್ವನೀಡಂ ಅಂಚೆ, ಬೆಂಗಳೂರು-560091 ರವರಿಗೆ ಮಾಹಿತಿಗಾಗಿ.
7) ಹೆಚ್ಚಿನ ಪ್ರತಿ.

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ / ಬಿಎಂಆರ್‌ಡಿಎ (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ / ಮಾಲಿನ್ಯ ನಿಯಂತ್ರಣ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2. ಈ ಪರಿವರ್ತಿತ ಜಮೀನನ್ನು ವ್ಯವಸಾಯೇತರ **ವಾಸದ** ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು, ಈ ಜಮೀನನ್ನು ಪೂರ್ವಾನುಮತಿ ಇಲ್ಲದೇ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿಐಎಎಪಿಎ/ಬಿಬಿಎಂಆರ್‌ಡಿಎ (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ/ ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಪ್ಲಾನಿಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.

4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ ನಿವೇಶನ, ಖಾಲಿ ಜಾಗ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿ.ಐ.ಎಎಪಿಎ/ಬಿ.ಎಂ.ಆರ್.ಡಿ.ಎ (ಸ್ಥಳೀಯ ಯೋಜನಾ ಪ್ರಾಧಿಕಾರ) ಬಿ.ಎಂ.ಐ.ಸಿ.ಎ.ಪಿ.ಎ ಪ್ರಾಧಿಕಾರದಿಂದ ಅನುಮೋದಿಸಿ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟ ಪಡಿಸಿದ ನಿಯಮಗಳ ರೀತಿ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿತಕ್ಕದ್ದು.

5. ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ ಕಟ್ಟಡಗಳನ್ನು ಸಂಬಂಧಪಟ್ಟ ನೊಂದಾವಣಾಧೀಕಾರಿಗಳಿಂದ/ಉಪನೋಂದಣಾಧಿಕಾರಿಗಳಿಂದ ನೊಂದಾವಣೆ ಮಾಡತಕ್ಕದ್ದಲ್ಲ, ಖಾತೆದಾರರು ಒಂದು ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿಗೆ ಪೂರಾ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದ್ದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.

6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯಾ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7. ಸದರಿ ಜಮೀನಿಗೆ ತಾಕು ಖೂಟ್ ಖರಾಬು ಇದ್ದಲ್ಲಿ, ಇದನ್ನು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರಕ್ಕೆ ಕಾಯ್ದಿರಿಸತಕ್ಕದ್ದು. ತಹಶೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ: ಪಿಡಬ್ಲ್ಯೂಡಿ:7556-665 ಆರ್ ಮತ್ತು ಬಿ-6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ನಂ. ಪಿ 1/7(11) 67, ದಿನಾಂಕ: 1-1-1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ. ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಯ ಅನುಮತಿ ಹೊಂದಿರತಕ್ಕದ್ದು.

10. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ/ ರಿಟ್ ಅರ್ಜಿ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11. ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂ ಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12. ಪರಿಷ್ಕೃತ ಮಾಸ್ಟರ್ ಪ್ಲಾನ್-2015 ರಲ್ಲಿ ಸೂಕ್ಷ್ಮ ವಲಯ (Sensitive Zone) ನಲ್ಲಿ ಬರುವ ಪ್ರದೇಶಗಳಿಗೆ ಜಿಲ್ಲಾಧಿಕಾರಿಗಳು, ಬೆಂಗಳೂರು ಜಿಲ್ಲೆ ಇವರಿಗೆ ಭೂ ಪರಿವರ್ತನೆ ಬಗ್ಗೆ ಮಾಹಿತಿ ನೀಡುವಾಗ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.

13. ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

14. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು. ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೇ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

15. ಅರ್ಜಿದಾರರು ಯಾವುದೇ ಸತ್ಯಾಂಶಗಳನ್ನು ಮರೆ ಮಾಚಿ ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತ ಜ್ಞಾಪನ ಪಡೆದಿರುವುದು ಸ್ಪಷ್ಟಪಟ್ಟಲ್ಲಿ ತನ್‌ತಾನೆ ರದ್ದುಗೊಳ್ಳುತ್ತದೆ. ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದೇ ಆಗಿರುತ್ತದೆ.

16. ಪ್ರಶ್ನಿತ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ, ತಕ್ಷಣವೇ ಪಕ್ಕ ಪೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

17. ಪ್ರಶ್ನಿತ ಜಾಗದಲ್ಲಿ ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 136(3)ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ.

**18. ಸಹಾಯಕ ಕಾರ್ಯಪಾಲಕ ಅಭಿಯಂತರರು, ನಗರ ಯೋಜನಾ ವಿಭಾಗ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ದಿನಾಂಕ: 13/08/2015ರ ಪತ್ರದಲ್ಲಿ ತಿಳಿಸಿರುವ ಷರತ್ತುಗಳಿಗೆ ಒಳಪಟ್ಟಿರುತ್ತೆ.**